**All India Radio: Bangalore**
**National Bulletin In Kannada**
**21.01.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.01.2026 1.10 p.m.**

**<><><><>**

ಮುಖ್ಯಾಂಶಗಳು

1. ಕರ್ನಾಟಕ ಪ್ರವಾಸದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್; ತುಮಕೂರಿನ ಡಾ.ಶಿವಕುಮಾರ ಸ್ವಾಮೀಜಿಯವರ ಸಂಸ್ಮರಣೋತ್ಸವದಲ್ಲಿ ಭಾಗಿ
2. ಭೂತ್‌ಮಟ್ಟದ ಅಧಿಕಾರಿಗಳು ದೇಶದ ಚುನಾವಣಾ ಪ್ರಜಾತಂತ್ರ ವ್ಯವಸ್ಥೆಯ ಆಧಾರ ಸ್ತಂಭ - ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್
3. ಮುಂದಿನ ತಿಂಗಳು ನವದೆಹಲಿಯಲ್ಲಿ ಭಾರತದಿಂದ ಕೃತಕ ಬುದ್ಧಿಮತ್ತೆ ಪ್ರಭಾವ ಶೃಂಗಸಭೆ- ಕೇಂದ್ರ ಸಚಿವ ಡಾ.ಎಸ್.ಜೈಶಂಕರ್
4. ಟಿ-೨೦ ಕ್ರಿಕೆಟ್; ನಾಗ್‌ಪುರದಲ್ಲಿಂದು ಭಾರತ-ನ್ಯೂಜಿಲೆಂಡ್ ನಡುವೆ ಮೊದಲ ಮುಖಾಮುಖಿ

<><><><>

ರಾಜ್ಯಕ್ಕೆ ಭೇಟಿ ನೀಡಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಕರ್ನಾಟಕದ ತುಮಕೂರಿನಲ್ಲಿ ಸಿದ್ದಗಂಗಾ ಮಠದ ತ್ರಿವಿಧ ದಾಸೋಹಿ ಡಾ.ಶಿವಕುಮಾರ ಸ್ವಾಮೀಜಿ ಅವರ ಪುಣ್ಯಸ್ಮರಣಾ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು, ದೇಶದ ಪ್ರಸಿದ್ಧ ಮಠಗಳಲ್ಲಿ ಒಂದಾಗಿರುವ ಸಿದ್ಧಗಂಗಾ ಮಠ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ರಂಗದಲ್ಲಿ ಸೇವೆ ಸಲ್ಲಿಸುವ ಮೂಲಕ ಆತ್ಮನಿರ್ಭರವನ್ನು ಸಾಧಿಸಲು ಶ್ರೀ ಶಿವಕುಮಾರ ಸ್ವಾಮೀಜಿಗಳ ದೂರದೃಷ್ಟಿ ಕಾರಣ ಎಂದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಮಾತನಾಡಿ, ಬಸವಣ್ಣನವರು ೧೨ನೇ ಶತಮಾನದಲ್ಲಿ ಪ್ರತಿಪಾದಿಸಿದ ಆಶಯಗಳನ್ನು ಶ್ರೀಶಿವಕುಮಾರ ಸ್ವಾಮೀಜಿ ಅನುಸರಿಸಿದರು. ಇಂದು ನಾವೆಲ್ಲ ಬಸವಣ್ಣನವರ ಸಮಾನತೆ, ಅಕ್ಷರ, ದಾಸೋಹವನ್ನು ಮುಂದುವರೆಸುವ ಪ್ರತಿಜ್ಞೆ ಕೈಗೊಳ್ಳಬೇಕಿದೆ ಎಂದರು. ಇಂದು ಮಧ್ಯಾಹ್ನ ಬೆಂಗಳೂರಿನ ಸಿ.ಎಂ.ಆರ್.ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ರಜತ

ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.  ಇಂದು ಬೆಳಗ್ಗೆ ಉಪರಾಷ್ಟ್ರಪತಿ ಸಿ.ಪಿ.ರಾಮಕೃಷ್ಣನ್ ಅವರು ವಾಯುಸೇನೆಯ ವಿಶೇಷ ವಿಮಾನದ ಮೂಲಕ ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿದರು. ಉಪರಾಷ್ಟ್ರಪತಿ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಆತ್ಮೀಯವಾಗಿ ಬರಮಾಡಿಕೊಂಡರು. ಈ ಸಮಯದಲ್ಲಿ ಕೇಂದ್ರ ರೈಲ್ವೇ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕರ್ನಾಟಕ ಪೊಲೀಸ್ ಮಹಾ ನಿರ್ದೇಶಕ ಎಂ.ಎ.ಸಲೀಂ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ್, ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ಭಾರತೀಯ ಚುನಾವಣಾ ಆಯೋಗ - ಇಸಿಐ ೨೦೨೬ ರ ಪ್ರಜಾಪ್ರಭುತ್ವ ಮತ್ತು ಚುನಾವಣೆಗಳ ನಿರ್ವಹಣೆ ಕುರಿತ ಭಾರತೀಯ ಅಂತಾರಾಷ್ಟ್ರೀಯ ಸಮ್ಮೇಳನ ನವದೆಹಲಿಯಲ್ಲಿ ಇಂದಿನಿಂದ ಆರಂಭವಾಗಿದೆ. ೩ ದಿನಗಳ ಈ ಸಮ್ಮೇಳನ, ದೆಹಲಿಯ ಭಾರತ ಮಂಟಪದಲ್ಲಿ ನಡೆಯುತ್ತಿದೆ. ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಕ್ಷೇತ್ರದಲ್ಲಿ ಭಾರತ ಆಯೋಜಿಸಿರುವ ಈ ರೀತಿಯ ಅತಿದೊಡ್ಡ ಜಾಗತಿಕ ಸಮ್ಮೇಳನ ಇದಾಗಿದೆ. ಪ್ರಪಂಚದಾದ್ಯಂತದ ೭೦ಕ್ಕೂ ಅಧಿಕ ದೇಶಗಳನ್ನು ಪ್ರತಿನಿಧಿಸುವ ಸುಮಾರು ೧೦೦ ಅಂತಾರಾಷ್ಟ್ರೀಯ ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ, ಭೂತ್‌ಮಟ್ಟದ ಅಧಿಕಾರಿಗಳು ದೇಶದ ಚುನಾವಣಾ ಪ್ರಜಾತಂತ್ರ ವ್ಯವಸ್ಥೆಯ ಆಧಾರ ಸ್ತಂಭಗಳಾಗಿದ್ದಾರೆ. ಭಾರತ ಜಗತ್ತಿನ ಪ್ರಜಾತಂತ್ರ ವ್ಯವಸ್ಥೆಗೆ ತಾಯಿಯಂತಿದ್ದು, ಮತದಾರರ ಪಟ್ಟಿ ಸಿದ್ದಪಡಿಸುವ, ಅರ್ಹ ಮತದಾರರನ್ನು ಸೇರ್ಪಡೆ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು. ಚುನಾವಣಾ ಆಯುಕ್ತರಾದ ಡಾ.ಸುಖಬೀರ್ ಸಿಂಗ್ ಸಂಧು ಮತ್ತು ಡಾ.ವಿವೇಕ್ ಜೋಶಿ ಮತ್ತಿತರರು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದಾರೆ. ಮೂರು ದಿನಗಳ ಕಾರ್ಯಕ್ರಮವು, ಚುನಾವಣಾ ನಿರ್ವಹಣಾ ಸಂಸ್ಥೆಗಳ ಸಾಮಾನ್ಯ ಮತ್ತು ಪೂರ್ಣಾವಧಿಯ

ಗೋಷ್ಠಿಗಳನ್ನು ಒಳಗೊಂಡಿದೆ. ಇದರಲ್ಲಿ ಉದ್ಘಾಟನಾ ಸಮಾರಂಭ, ಇಎಂಬಿ ನಾಯಕರ ಸಮಗ್ರ ಸಭೆ, ಇಎಂಬಿ ಕಾರ್ಯಪಡೆ ಸಭೆಗಳು, ಜಾಗತಿಕ ಚುನಾವಣಾ ಸಮಸ್ಯೆಗಳು, ಮಾದರಿ ಅಂತಾರಾಷ್ಟ್ರೀಯ ಚುನಾವಣಾ ಮಾನದಂಡಗಳು ಮತ್ತು ಚುನಾವಣಾ ಪ್ರಕ್ರಿಯೆಗಳಲ್ಲಿನ ನಾವೀನ್ಯತೆಗಳು ಮತ್ತು ಉತ್ತಮ ಪದ್ಧತಿಗಳ ಮೇಲೆ ಹೆಚ್ಚಿನ ಗಮನ ಕೇಂದ್ರೀಕರಿಸುವ ವಿಷಯಾಧಾರಿತ ಗೋಷ್ಠಿಗಳು ಸೇರಿವೆ.

<><><>

ಭಯೋತ್ಪಾದನೆಯನ್ನು ಎದುರಿಸುವಲ್ಲಿ, ದೇಶಗಳು ಪರಸ್ಪರ ಹಂಚಿಕೆಯ ಸವಾಲುಗಳ ಕುರಿತು ಸಹಕರಿಸುವುದು ಎಂದಿಗಿಂತಲೂ ಹೆಚ್ಚು ಅಗತ್ಯವಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಸ್ಪ್ಯಾನಿಷ್ ವಿದೇಶಾಂಗ ಸಚಿವ ಜೋಸ್ ಮ್ಯಾನುಯೆಲ್ ಅಲ್ಬಾರೆಸ್ ಬ್ಯೂನೊ ಅವರೊಂದಿಗಿನ ಮಾತುಕತೆಯ ಆರಂಭಿಕ ಅಧಿವೇಶನದಲ್ಲಿ ಡಾ. ಜೈಶಂಕರ್ ಈ ವಿಷಯ ತಿಳಿಸಿದ್ದಾರೆ. ಭಾರತ ಮತ್ತು ಸ್ಪೇನ್ ಎರಡೂ ಭಯೋತ್ಪಾದನೆ ದಾಳಿಗೆ ಒಳಗದ ರಾಷ್ಟ್ರಗಳಾಗಿವೆ. ಜಾಗತಿಕ ವ್ಯವಸ್ಥೆಯು ಆಳವಾದ ಪರಿವರ್ತನೆಯತ್ತ ಸಾಗುತ್ತಿದೆ. ಭಯೋತ್ಪಾದನೆಯ ಬಗ್ಗೆ ಜಗತ್ತು ಶೂನ್ಯ ಸಹಿಷ್ಣುತೆಯ ವಿಧಾನವನ್ನು ಅಳವಡಿಸಿಕೊಳ್ಳಬೇಕು ಎಂದು ಸಚಿವ ಎಸ್.ಜೈಶಂಕರ್ ಒತ್ತಿ ಹೇಳಿದ್ದಾರೆ. ಮುಂದಿನ ತಿಂಗಳು ನವದೆಹಲಿಯಲ್ಲಿ ಭಾರತವು ಕೃತಕ ಬುದ್ಧಿಮತ್ತೆ ಪ್ರಭಾವ ಶೃಂಗಸಭೆ -೨೦೨೬ ಅನ್ನು ಆಯೋಜಿಸಲಿದೆ. ಕೃತಕ ಬುದ್ಧಿಮತ್ತೆಗೆ ಭಾರತದ ವಿಧಾನವು ಮಾನವ ಕೇಂದ್ರಿತ, ಎಲ್ಲರನ್ನೂ ಒಳಗೊಳ್ಳುವ ಮತ್ತು ಜವಾಬ್ದಾರಿಯುತ ಹಾಗೂ ನೈತಿಕ ಮೌಲ್ಯಗಳ ಮೇಲೆ ಕೇಂದ್ರೀಕೃತವಾಗಿದೆ ಎಂದು ಅವರು ವಿವರಿಸಿದ್ದಾರೆ. ಈ ವರ್ಷ ಭಾರತ ಮತ್ತು ಸ್ಪೇನ್ ನಡುವಿನ ರಾಜತಾಂತ್ರಿಕ ಸಂಬಂಧಕ್ಕೆ ೭೦ ವರ್ಷಗಳಾಗಿವೆ. ಉಭಯ ದೇಶಗಳು ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳು ಮತ್ತು ಬಹುಪಕ್ಷೀಯತೆ ಹಾಗೂ ನಿಯಮ ಆಧಾರಿತ ಕ್ರಮಕ್ಕೆ ಗೌರವದಿಂದ ಬೇರೂರಿರುವ ಆತ್ಮೀಯ ಮತ್ತು ಸ್ನೇಹಪರ ಸಂಬಂಧವನ್ನು ಅನುಭವಿಸುತ್ತಿವೆ ಎಂದು ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

<><><>

ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಧಾನಮಂತ್ರಿಗಳ ಪ್ರಮುಖ ವೇದಿಕೆಯಾದ ಪ್ರಗತಿ ತನ್ನ ಸಭೆಗಳನ್ನು ಯಶಸ್ವಿಯಾಗಿ ನಡೆಸುವುದರೊಂದಿಗೆ ಮಹತ್ವದ ಮೈಲಿಗಲ್ಲು

ಸಾಧಿಸಿದೆ. ಈ ವಿಶೇಷ ಸರಣಿಯಲ್ಲಿ, ಇಂದು ಕರ್ನಾಟಕದ ಮೂಲಸೌಕರ್ಯ ಅಭಿವೃದ್ಧಿ ಕುರಿತ ವಿಶೇಷ ವರದಿ ಮೂಡಿಬರಲಿದೆ.

**ಈ ಕುರಿತು ಒಂದು ವರದಿ : ಚೇತನ್ ಸಿ.ವಿ. (೪೦ ಸೆಕೆಂಡ್‌ಗಳು)**

ಕರ್ನಾಟಕಕ್ಕೆ ಒಟ್ಟಾರೆ ೧೮೭ ಯೋಜನೆಗಳು ಮಂಜೂರಾಗಿದ್ದು, ದೇಶದ ಮೂಲಸೌಕರ್ಯ ವಲಯದಲ್ಲಿ ರಾಜ್ಯ ಮಹತ್ವದ ಸ್ಥಾನದಲ್ಲಿದೆ. ಒಟ್ಟಾರೆ ಆರು ಲಕ್ಷದ ೪೮ ಸಾವಿರದ ೪೩೬ ಕೋಟಿ ರೂಪಾಯಿ ಮೊತ್ತದ ಯೋಜನೆಗಳು ಪ್ರಗತಿಯಲ್ಲಿವೆ. ಈ ಎಲ್ಲಾ ಯೋಜನೆಗಳ ಮೇಲೆ ಪ್ರಧಾನಮಂತ್ರಿಗಳ ಪ್ರಮುಖ ವೇದಿಕೆಯಾದ ಪ್ರಗತಿ ಮೂಲಕ ನಿಗಾವಹಿಸಲಾಗಿದೆ. ಈ ಪೈಕಿ ೫೩ ಯೋಜನೆಗಳಿಗೆ ೧ ಲಕ್ಷದ ೧೪ ಸಾವಿರದ ೨೮೩ ಕೋಟಿ ರೂಪಾಯಿ ವೆಚ್ಚ ಮಾಡಿದ್ದು, ಇವು ಅನುಷ್ಠಾನಗೊಂಡಿವೆ. ಉಳಿದ ೧೩೪ ಯೋಜನೆಗಳಿಗೆ ೫ ಲಕ್ಷ ೩೪ ಸಾವಿರದ ೧೫೩ ಕೋಟಿ ರೂಪಾಯಿ ವಿನಿಯೋಗಿಸಲಾಗುತ್ತಿದೆ. ಭೂಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ, ೧೩ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ತೈಲ ಮತ್ತು ಅನಿಲ ವಲಯದಿಂದ ೧೨, ರೈಲ್ವೆ ಕ್ಷೇತ್ರದಲ್ಲಿ ೮ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಭೂಸಾರಿಗೆ ಮತ್ತು ಹೆದ್ದಾರಿ ಕ್ಷೇತ್ರದಿಂದ ೭೦ ಹಾಗೂ ರೈಲ್ವೆ ವಲಯದಿಂದ ೧೭ ಯೋಜನೆಗಳು ಅನುಷ್ಠಾನದ ಹಂತದಲ್ಲಿವೆ. ಆರೋಗ್ಯ, ಉಕ್ಕು, ಸಿಮೆಂಟ್, ಗಣಿಗಾರಿಕೆ, ಮತ್ತಿತರ ವಲಯದ ಯೋಜನೆಗಳ ಮೇಲೆ ಈ ಪ್ರಗತಿ ವೇದಿಕೆ ಕಣ್ಗಾವಲಿನ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ.

<><><><>

ಬಿ.ಎಚ್.ಇ.ಎಲ್ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ - ಡಿಆರ್‌ಡಿಒ, ಅಸೋಸಿಯೇಷನ್ ಆಫ್ ಓಲ್ಡ್ ಕ್ರೌಸ್ ಸೇರಿದಂತೆ ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ನಿನ್ನೆ ಆಯೋಜಿಸಿದ್ದ ೭ನೇ ಅಂತಾರಾಷ್ಟ್ರೀಯ ಯುದ್ಧತಂತ್ರ ಸಮ್ಮೇಳನಕ್ಕೆ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಮನೋಜ್ ಜೈನ್ ಚಾಲನೆ ನೀಡಿದರು. ಬಳಿಕ ಮನೋಜ್ ಜೈನ್ ಮಾತನಾಡಿ, ನಮ್ಮಲ್ಲಿ ಎಲ್ಲಾ ಕ್ಷೇತ್ರದ ತಂತ್ರಜ್ಞಾನ ಇನ್ನೂ ತಳಮಟ್ಟ ಹಾಗೂ ಗಾಳಿಯಲ್ಲಿ ಹಾರಾಡುವ ಮಟ್ಟದಲ್ಲಿ ಮಾತ್ರ ಅಭಿವೃದ್ಧಿ ಹೊಂದಿದ್ದು, ಮತ್ತಷ್ಟು ವೇಗವಾಗಿ ಗಗನಕ್ಕೆ ಚಿಮ್ಮುವಂತಾಗಬೇಕು. ಯುದ್ಧ ತಂತ್ರಜ್ಞಾನ ಮತ್ತಷ್ಟು ಅಭಿವೃದ್ಧಿ ಹೊಂದಲು ಯುವ

ವಿಜ್ಞಾನಿಗಳು, ತಂತ್ರಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಯುವಕರು ಕೈಜೋಡಿಸಬೇಕು ಎಂದರು.

<><><><>

ಭಾರತೀಯ ರೈಲ್ವೆ ಇಲಾಖೆ ಡಿಜಿಟಲ್ ವ್ಯವಹಾರವನ್ನು ಉತ್ತೇಜಿಸುವ ಸಲುವಾಗಿ ಖಚಿಟ ಠಟಿಜ ಂಠಿಠಿ ಆರಂಭಿಸಿದ್ದು, ಆಪ್ ಮೂಲಕ ಟಿಕೆಟ್ ಮುಂಗಡ ಕಾಯ್ದಿರಿಸುವವರಿಗೆ ಶೇಕಡಾ ೩ರಷ್ಟು ರಿಯಾಯಿತಿ ನೀಡಲು ನಿರ್ಧರಿಸಿದೆ. ರೈಲ್ವೆ ಪ್ರಯಾಣಿಕರಿಗೆ ಖಚಿಟ ಠಟಿಜ ಂಠಿಠಿ ಇನ್ನಷ್ಟು ಸುಲಭ ಮತ್ತು ಸುಗಮ ಸೇವೆ ಒದಗಿಸುವ ಉದ್ದೇಶದಿಂದ ಅಧಿಕೃತ ಮೊಬೈಲ್ ಅಪ್ಲಿಕೇಷನ್ ಸಹಕಾರಿಯಾಗಲಿದ್ದು, ಒಂದೇ ಸೂರಿನಡಿ ರೈಲ್ವೆಯ ಎಲ್ಲ ಸೇವೆಗಳು ಲಭ್ಯವಾಗಲಿದೆ. ಮೈಸೂರಿನಲ್ಲಿ ಪ್ರಯಾಣಿಕರು ಖಚಿಟ ಠಟಿಜ ಂಠಿಠಿ ಸೇವೆ ಸದುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಪ್ರಯಾಣಿಕರಾದ ನೋನಿತಾ, ಭಾರತೀಯ ರೈಲ್ವೆ ಇಲಾಖೆ ಪ್ರಯಾಣಿಕರಿಗೆ ಮತ್ತಷ್ಟು ಸೇವೆ ಒದಗಿಸುವ ಉದ್ದೇಶದಿಂದ ಹೊಸ ಮೊಬೈಲ್ ಅಪ್ಲೀಕೇಷನ್ ಆರಂಭಿಸಿದ್ದು, ಈ ಅಪ್ಲಿಕೇಷನ್ ಮೂಲಕ ಟಿಕೆಟ್ ಬುಕ್ಕಿಂಗ್ ಮಾಡುವುದರಿಂದ ಶೇಕಡ ೩ರಷ್ಟು ರಿಯಾಯಿತಿ ದೊರೆಯಲಿದ್ದು, ಇದರ ಸದುಪಯೋಗ ಪಡೆದುಕೊಂಡಿರುವುದಾಗಿ ತಿಳಿಸಿದರು.

<><><><>

ನಾಗಪುರದಲ್ಲಿಂದು ಭಾರತ - ನ್ಯೂಜಿಲೆಂಡ್ ನಡುವೆ ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ನಡೆಯಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಐದು ಪಂದ್ಯಗಳ ಸರಣಿಯ ಮೊದಲ ಹಣಾಹಣಿಯಲ್ಲಿ ಭಾರತ ಸೇಡು ತೀರಿಸಿಕೊಳ್ಳುವ ತವಕದಲ್ಲಿದೆ.

<><><><>

ಭಾರತೀಯ ರೈಲ್ವೆಯ 'ಒಂದು ನಿಲ್ದಾಣ ಒಂದು ಉತ್ಪನ್ನ-ಒಎಸ್‌ಒಪಿ' ಯೋಜನೆಯು ದೇಶಾದ್ಯಂತ ಸ್ಥಳೀಯ ಕರಕುಶಲತೆಯನ್ನು ಉತ್ತೇಜಿಸಲು ಮತ್ತು ಸುಸ್ಥಿರ ಜೀವನೋಪಾಯವನ್ನು ಸೃಷ್ಟಿಸಲು ಒಂದು ಪ್ರಮುಖ ಉಪಕ್ರಮವಾಗಿ ಹೊರಹೊಮ್ಮಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>